ಒ ಎಸ್ 206/2021

ಪಿಡಬ್ಲ್ಯೂ 1

ದಿನಾಂಕ 05-10-2021 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಎಸ್ ಎನ್ ಎಂ ವಕೀಲರವರಿಂದ:

1. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಪ್ರಮಾಣ ಪತ್ರದಲ್ಲಿ ತಿಳಿಸಿರುವ ವಿಷಯ ಸತ್ಯವಿರುತ್ತದೆ. ಅದರಲ್ಲಿರುವ ಸಹಿ ನನ್ನದಾಗಿರುತ್ತದೆ. ನಾನು ನೀಡಿದ ಮಾಹಿತಿಯ ಮೇರೆಗೆ ವಕೀಲರು ಪ್ರಮಾಣ ಪತ್ರವನ್ನು ತಯಾರಿಸಿರುತ್ತಾರೆ. ಅದನ್ನು ನನ್ನ ಸಾಕ್ಷ್ಯ ಎಂದು ಪರಿಗಣಿಸಲು ಕೋರುತ್ತೇನೆ.
2. ದಿನಾಂಕ 20-07-2019 ರಂದು ಪ್ರತಿವಾದಿ ಬರೆದು ಕೊಟ್ಟ ಅನ್ ಡಿಮ್ಯಾಂಡ್ ಪ್ರೊನೋಟನ್ನು ಹಾಜರುಪಡಿಸುತ್ತಿದ್ದು ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿರುವ ಪ್ರತಿವಾದಿಯ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿದಾರರಾದ ಲೋಕೇಶ ಮತ್ತು ಗೋವಿಂದೇಗೌಡರವರ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-1(ಬಿ) ನಿಪಿ-1 (ಸಿ) ಎಂದು ಗುರುತಿಸಲಾಯಿತು. ಪತ್ರ ಬರಹಗಾರರಾದ ರಾಮಮೂರ್ತಿ ರವರ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-1(ಡಿ) ಎಂದು ಗುರುತಿಸಲಾಯಿತು.
3. ಹಣ ಸಂದ ರಶೀದಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸುತ್ತಿದ್ದು ಸದರಿ ದಾಖಲೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಪ್ರತಿವಾದಿಯ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸಾಕ್ಷಿದಾರರಾದ ಲೋಕೇಶ ಮತ್ತು ಗೋವಿಂದೇಗೌಡರವರ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-2(ಬಿ) ನಿಪಿ-2 (ಸಿ) ಎಂದು ಗುರುತಿಸಲಾಯಿತು. ಪತ್ರ ಬರಹಗಾರರಾದ ರಾಮಮೂರ್ತಿ ರವರ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-2(ಡಿ) ಎಂದು ಗುರುತಿಸಲಾಯಿತು.
4. ದಿನಾಂಕ 20-04-2021 ರಂದು ವಕೀಲರ ಮೂಲಕ ಪ್ರತಿವಾದಿಗೆ ನೀಡಿದ ಲೀಗಲ್ ನೋಟಿಸನ ಕಚೇರಿ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸುತ್ತಿದ್ದು ಸದರಿ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಅಂಚೆ ರಶೀದಿ ಮತ್ತು ಹಾಗೂ ಅಂಚೆ ಸ್ವೀಕೃತಿ ಪತ್ರವನ್ನು ನ್ಯಾಯಾಲಯಕ್ಕೆ ಹಾಜರು ಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-4 ಮತ್ತು ನಿಪಿ-5 ಎಂದು ಗುರುತಿಸಲಾಯಿತು.

ದಾವಾ ಪತ್ರದಲ್ಲಿ ಕೇಳಿರುವಂತೆ ಪರಿಹಾರವನ್ನು ಒದಗಿಸಬೇಕೆಂದು ನ್ಯಾಯಾಲಯದಲ್ಲಿ ಪ್ರಾರ್ಥಿಸಿಕೊಳ್ಳುತ್ತೇನೆ.

ಪ್ರಕರಣವು ಏಪಕ್ಷೀಯವಾಗಿರುವ ಕಾರಣ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಗಿದೆ.

ಮುಂದುವರಿದ ವಾದಿ ಪರ ವಿಚಾರಣೆಗೆ ವಾದಿ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಸಾ.ಓ.ಹೇ.ಸ.ಇದೆ.

2 ನೇ ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಪಾಂಡವಪುರ.